Akashvani: Bangalore
Regional Bulletin In Kannada
07.09.2025 : 18.40hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

07.09.2025 : 18.40hrs

*******

**ಮುಖ್ಯಾಂಶಗಳು:**

೧. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ

೨. ಮಹಾವೀರ ಚಕ್ರ ಪುರಸ್ಕೃತ ಸಡ್ರನ್ ಲೀಡರ್ ಅಜ್ಜಮಾಡ ಬಿ. ದೇವಯ್ಯ ಪುಣ್ಯ ಸ್ಮರಣೆ

೩. ಸುಳ್ಳು ಸುದ್ದಿಗಳನ್ನು ಹರಡುವವರ ವಿರುದ್ಧ ಕ್ರಮ ; ದಕ್ಷಿಣ ಕನ್ನಡ ಪೊಲೀಸರಿಂದ ಎಚ್ಚರಿಕೆ

೪. ಇಂದು ರಾತ್ರಿ ಖಗ್ರಾಸ ಚಂದ್ರಗ್ರಹಣ ; ಚಂದ್ರನತ್ತ ವಿಜ್ಞಾನಾಸಕ್ತರ ಕುತೂಹಲ

*******

ಇಂದು ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ. ಇದರ ಅಂಗವಾಗಿ ರಾಜ್ಯದ ವಿವಿಧೆಡೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಯಾವುದೇ ರೀತಿಯ ಕ್ರಾಂತಿ ಮಾಡದೆ ಸಮಾಜಕ್ಕೆ ತಮ್ಮದೇ ಆದ ತತ್ವ, ಆದರ್ಶಗಳ ಮೂಲಕ ಸಮಾಜಕ್ಕೆ ಅನೇಕ ಕೊಡುಗೆ ನೀಡಿದವರು ದಾರ್ಶನಿಕ ಸಂತ ಬ್ರಹ್ಮಶ್ರೀ ನಾರಾಯಣ ಗುರುಗಳು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಹೇಳಿದ್ದಾರೆ. ಮಂಡ್ಯ ನಗರದ ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಈಡಿಗರ ಸಂಘ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮವನ್ನು ಅವರು ಉದ್ಘಾಟಿಸಿ ಮಾತನಾಡಿದರು. ಬ್ರಹ್ಮ ಶ್ರೀ ನಾರಾಯಣಗುರುಜೀ ಅವರು ಪ್ರತಿಯೊಬ್ಬರೂ ಸಮಾನತೆ ಮತ್ತು ಸಹಬಾಳ್ವೆಯಿಂದ ಬದುಕಬೇಕು. ಅವರ ತತ್ವ ಮತ್ತು ಆದರ್ಶ ಸಮಾಜಕ್ಕೆ ಪ್ರಸ್ತುತ ಸಮಾಜದಲ್ಲಿ ಅವಶ್ಯಕವಾಗಿದೆ ಎಂದರು. ಜಿಲ್ಲಾ ಆರ್ಯ ಈಡಿಗರ ಸಂಘದ ಸಹ ಕಾರ್ಯದರ್ಶಿ ಮಾದೇವ ಮಾತನಾಡಿ, ಮಾನವರಲ್ಲಿ ದೇವರನ್ನು ಕಂಡವರು ಹಾಗೂ ಹಲವು ಸಾಮಾಜಿಕ ಚಳುವಳಿಗಳನ್ನು ನಡೆಸಿ, ಮನುಕುಲದ ಒಳಿತಿಗಾಗಿ ಶ್ರಮಿಸಿದವರು ನಾರಾಯಣ ಗುರುಗಳು ಎಂದು ಹೇಳಿದರು. ಮೌಢ್ಯತೆ,

ಜಾತಿ ವ್ಯವಸ್ಥೆ ತೊಲಗಿಸಲು ಜೀವನ ಮುಡುಪಿಟ್ಟವರು ಬ್ರಹ್ಮಶ್ರೀ ನಾರಾಯಣ ಗುರುಗಳು ಎಂದು ಸಚಿವ ಎನ್.ಎಸ್.ಬೋಸರಾಜು ಹೇಳಿದ್ದಾರೆ. ರಾಯಚೂರಿನ ಎಚ್‌ಎಸ್‌ಆರ್ ಬಡಾವಣೆಯಲ್ಲಿ ಜಿಲ್ಲಾಡಳಿತ, ನಗರಸಭೆ ವತಿಯಿಂದ ನಗರದ ರಂಗಮಂದಿರದಲ್ಲಿ ಆಯೋಜಿಸಿದ್ದ ನಾರಾಯಣ ಗುರು ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ನಗರ ಶಾಸಕ ಶಿವರಾಜ್ ಪಾಟೀಲ್, ಗ್ರಾಮೀಣ ಶಾಸಕ ದದ್ದಲ್ ಬಸನಗೌಡ, ಮೇಯರ್ ನರಸಮ್ಮ, ನರಸಿಂಹಲು ಮಾಡಗಿರಿ ಇದ್ದರು. ಉತ್ತರ ಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮವನ್ನು ತಹಸೀಲ್ದಾರ್ ನಿಶ್ಚಲ್ ನರೋನ್ಹಾ ಉದ್ಘಾಟಿಸಿದರು. ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ರಾಮಾ ನಾಯ್ಕ ಮಾತನಾಡಿ, ಸಮಾಜ ಪರಿವರ್ತಕ, ಸಮಾಜ ಸುಧಾರಕ, ಧಾರ್ಮಿಕ ಚಿಂತಕರಾದ ನಾರಾಯಣ ಗುರುಗಳು, ಒಂದು ಜಾತಿ, ಒಂದು ಧರ್ಮಕ್ಕೆ ಸಿಮೀತರಾದವರಲ್ಲ. ಇಡೀ ಜಗತ್ತಿನ ಮಾನವಕುಲಕ್ಕೆ ಗುರುಗಳು. ಸಮಾಜದಲ್ಲಿ ಬೇರೂರಿದ್ದ ಅಸ್ಪೃಶ್ಯತೆ ಮತ್ತು ಜಾತಿ ವ್ಯವಸ್ಥೆಯನ್ನು ಹೋಗಲಾಡಿಸಲು ಶ್ರಮಿಸಿದವರು ಎಂದು ಹೇಳಿದರು. ನಾರಾಯಣ ಗುರುಗಳ ಸುಧಾರಣಾ ಚಳವಳಿಯು ಸಾಮಾಜಿಕ, ಶೈಕ್ಷಣಿಕ ಮತ್ತು ರಾಜಕೀಯ ಆಯಾಮಗಳನ್ನು ಪಡೆದುಕೊಂಡು ಸಮಾಜದಲ್ಲಿ ದೊಡ್ಡ ಬದಲಾವಣೆಯನ್ನು ತಂದಿತು. ಅವರ ಆದರ್ಶ ಮತ್ತು ತತ್ವಗಳು, ಜಾತಿ, ಧರ್ಮ ಭೇದಗಳಿಲ್ಲದ ವಿಶ್ವಪ್ರಜ್ಞೆಯನ್ನು ಬೆಳೆಸಲು ಪ್ರೇರಣೆಯಾಗಿದೆ ಎಂದು ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದ್ದಾರೆ. ದಾವಣಗೆರೆ ಜಿಲ್ಲಾಡಳಿತ ಭವನದಲ್ಲಿಂದು ಹಮ್ಮಿಕೊಂಡಿದ್ದ ನಾರಾಯಣ ಗುರು ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಂದಾಚಾರ, ಮೂಢನಂಬಿಕೆಗಳೇ ತುಂಬಿದ್ದ ಸಮಾಜದಲ್ಲಿ ನಾರಾಯಣ ಗುರುಗಳು ಕಂದಾಚಾರ, ಮೂಢನಂಬಿಕೆಗಳನ್ನು ಹೋಗಲಾಡಿಸಿ, ಸಾಮಾಜಿಕ ಕ್ರಾಂತಿ ಮಾಡಿದರು ಎಂದರು.

*******

೧೯೬೫ರ ಭಾರತ-ಪಾಕಿಸ್ತಾನ ಯುದ್ಧದಲ್ಲಿ ವೀರ ಮರಣ ಹೊಂದಿದ ಮಹಾವೀರ ಚಕ್ರ ಪುರಸ್ಕೃತ ಸಡ್ರನ್ ಲೀಡರ್ ಅಜ್ಜಮಾಡ ಬಿ.ದೇವಯ್ಯ ಅವರ ೬೦ನೇ ಪುಣ್ಯಸ್ಮರಣೆ ಮಡಿಕೇರಿಯಲ್ಲಿ ಅರ್ಥಪೂರ್ಣವಾಗಿ ನಡೆಯಿತು. ಮಡಿಕೇರಿಯ ಸಡ್ರನ್ ಲೀಡರ್ ಅಜ್ಜಮಾಡ

ಬಿ.ದೇವಯ್ಯ ವೃತ್ತದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ನಿವೃತ್ತ ಸೇನಾಧಿಕಾರಿಗಳು, ಯೋಧರು, ಜನಪ್ರತಿನಿಧಿಗಳು, ಕೊಡವ ಸಮಾಜದ ಪ್ರತಿನಿಧಿಗಳು ಹಾಗೂ ವಿವಿಧ ಸಂಘ, ಸಂಸ್ಥೆಗಳ ಪ್ರಮುಖರು ವೀರ ಸೇನಾನಿಗೆ ಗೌರವ ಅರ್ಪಿಸಿದರು. ವಿಧಾನಸಭೆಯ ಮಾಜಿ ಅಧ್ಯಕ್ಷ ಕೆ.ಜಿ.ಬೋಪಯ್ಯ ಮಾತನಾಡಿ, ಭಾರತ-ಪಾಕಿಸ್ತಾನ ನಡುವೆ ನಡೆದ ಯುದ್ಧದಲ್ಲಿ ಶತ್ರುಗಳ ವಿಮಾನವನ್ನು ಹೊಡೆದುರುಳಿಸಿ, ದೇಶಕ್ಕಾಗಿ ವೀರಮರಣವನ್ನಪ್ಪಿದ ಅಜ್ಜಮಾಡ ದೇವಯ್ಯ ದೇಶಪ್ರೇಮದಲ್ಲಿ ಎಲ್ಲರಿಗೂ ಮಾದರಿಯಾಗಿದ್ದಾರೆ.

*******

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಿಎಸ್‌ಟಿಯನ್ನು ಪರಿಷ್ಕೃತಗೊಳಿಸಿದೆ. ಇದರಿಂದಾಗಿ ಎಲ್ಲ ವರ್ಗಗಳ ಅಗತ್ಯ ವಸ್ತುಗಳು ಕೈಗೆಟುವ ದರದಲ್ಲಿ ದೊರೆಯುವಂತೆ ಮಾಡಿರುವುದು ಶ್ಲಾಘನೀಯ ಎಂದು ಬಿಜೆಪಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಡಾ.ಸಿದ್ದರಾಮಯ್ಯ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ೮ ವರ್ಷಗಳಿಂದ ಜಿಎಸ್‌ಟಿಯಲ್ಲಿನ ನ್ಯೂನ್ಯತೆಗಳನ್ನು ಪರಿಶೀಲಿಸಿದ ೫೬ನೇ ಜಿಎಸ್‌ಟಿ ಪರಿಷತ್ತು, ಅವುಗಳನ್ನು ಸರಿಪಡಿಸಿ, ಈ ನಿರ್ಧಾರ ಕೈಗೊಂಡಿದೆ ಎಂದರು. ಜಿಎಸ್‌ಟಿ ಜಾರಿಗೂ ಮೊದಲು ರಾಜ್ಯ ಸರ್ಕಾರಗಳು ತೆರಿಗೆಯನ್ನು ತನ್ನಿಷ್ಟಕ್ಕೆ ವಿಧಿಸುತ್ತಿತ್ತು. ೨೦೧೭ರ ಜುಲೈ ೦೧ರಿಂದ ಜಿಎಸ್‌ಟಿ ಜಾರಿ ಮಾಡಲಾದ ಹಿನ್ನೆಲೆ ವಿದೇಶಿ ಬಂಡವಾಳ ಹೂಡಿಕೆ ಮತ್ತು ರಾಜ್ಯಗಳ ನಡುವಿನ ಸರಕು ಸಾಗಾಣೆ ಸರಳೀಕೃತಗೊಳಿಸಲಾಯಿತು. ಈ ನಿಟ್ಟಿನಲ್ಲಿ ಏಕ ರಾಷ್ಟ್ರ, ಏಕ ತೆರಿಗೆ, ಏಕ ವ್ಯಾಪಾರಕ್ಕೆ ನಾಂದಿ ಹಾಡಿತ್ತು ಎಂದು ಸ್ಮರಿಸಿದರು.ಈ ಹಿಂದೆ ನಾಲ್ಕು ಸ್ತರಗಳಲ್ಲಿ ಜಿಎಸ್‌ಟಿ ಪಾವತಿ ಮಾಡಬೇಕಾಗಿತ್ತು. ಆದರೆ ಈಗ ೨ ಸ್ತರಗಳಲ್ಲಿ ಜಿಎಸ್‌ಟಿ ಪಾವತಿ ಮಾಡಬೇಕಿದೆ. ಆದರೆ ಔಷಧೋಪಚಾರ ಎಲ್ಲಾ ವರ್ಗಕ್ಕೂ ಬೇಕಿದೆ. ಕೃಷಿ ಉಪಕರಣಗಳು, ರೈತರ ಅಭಿವೃದ್ಧಿಗೆ ಸಹಕಾರವಾಗಿದ್ದು, ಅತ್ಯಗತ್ಯ ವಸ್ತುಗಳನ್ನು ತೀರ ಕಡಿಮೆ ತೆರಿಗೆ ಪಾವತಿಯ ಸ್ತರಕ್ಕೆ ತರಲಾಗಿದೆ ಎಂದು ಡಾ.ಸಿದ್ದರಾಮಯ್ಯ ಹೇಳಿದರು.

ಧ್ವನಿ: ಡಾ.ಸಿದ್ದರಾಮಯ್ಯ

*******

ಸುಳ್ಳು ಸುದ್ದಿಗಳನ್ನು ಹರಡುವ ಮೂಲಕ ಸಮಾಜದ ಶಾಂತಿಗೆ ಭಂಗ ತರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಅರುಣ್ ಕೆ. ಎಚ್ಚರಿಕೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ತಿಂಗಳಲ್ಲಿ ಕೋಮು ಸೌಹಾರ್ದತೆಗೆ ಮತ್ತು ಶಾಂತಿ-ಸುವ್ಯವಸ್ಥೆಗೆ ಧಕ್ಕೆ ತರುವಂತಹ ಸುಳ್ಳು ಸುದ್ದಿಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುತ್ತಿರುವುದು ಕಂಡುಬಂದಿದೆ. ಇದರಲ್ಲಿ ಕೆಲವು ಕಿಡಿಗೇಡಿಗಳು, ವಿದ್ಯಾವಂತರು, ಸಂಘಟಕರು ಸಹ ಪಾಲುದಾರರಾಗಿರುವುದು ಗಮನಕ್ಕೆ ಬಂದಿದೆ. ಇದು ಜಿಲ್ಲೆಗೆ ಕಪ್ಪು ಚುಕ್ಕೆ ತರುವಂತಹ ವಿಷಯ. ಪೊಲೀಸ್ ಇಲಾಖೆ ಇದನ್ನು ಗಂಭೀರವಾಗಿ ಪರಿಗಣಿಸಲಿದೆ ಎಂದು ಹೇಳಿದರು. ಸುಳ್ಳು ಸುದ್ದಿ ಅಥವಾ ಪ್ರಚೋದನಾಕಾರಿ ಸಂದೇಶಗಳನ್ನು ಜನತೆ ನಂಬಬಾರದು. ಅಂತಹ ಪೋಸ್ಟ್‌ಗಳಿಗೆ ಪ್ರತಿಕ್ರಿಯೆ ನೀಡದೇ ಇದ್ದಾಗ ಮಾತ್ರ ತಪ್ಪು ಸಂದೇಶ ರವಾನೆಯಾಗುವುದನ್ನು ತಡೆಯಲು ಸಾಧ್ಯವಾಗುತ್ತದೆ. ಆದ್ದರಿಂದ, ಸಾಮಾಜಿಕ ಜಾಲತಾಣಗಳಲ್ಲಿ ಸಂದೇಶ ಅಥವಾ ಪೋಸ್ಟ್ ಹರಿಬಿಡುವ ಮೊದಲು, ಅದರ ನೈಜತೆಯನ್ನು ಪರಿಶೀಲಿಸಬೇಕು. ಸಮಾಜದಲ್ಲಿ ಶಾಂತಿ ಕಾಯ್ದುಕೊಳ್ಳಲು ಪ್ರತಿಯೊಬ್ಬರೂ ಆದ್ಯತೆ ನೀಡಬೇಕು ಎಂದು ಡಾ.ಅರುಣ್ ಕೆ. ಮನವಿ ಮಾಡಿದರು.

*******

ಇಂದು ರಾತ್ರಿ ಸಂಭವಿಸಲಿರುವ ಖಗ್ರಾಸ ಚಂದ್ರಗ್ರಹಣ ವೀಕ್ಷಿಸಲು ವಿಜ್ಞಾನಾಸಕ್ತರು ಕುತೂಹಲದಿಂದ ಕಾಯುತ್ತಿದ್ದಾರೆ. ಚಂದ್ರ ಗ್ರಹಣದ ಅಂಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಪ್ರಸಿದ್ಧ ಘಾಟಿ ಕ್ಷೇತ್ರದ ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಾಲಯವನ್ನು ಸಂಜೆ ೪:೩೦ಕ್ಕೆ ಮುಚ್ಚಲಾಯಿತು. ನಾಳೆ ಬೆಳಗ್ಗೆ ಶುದ್ಧೀಕರಣದ ನಂತರ ತೆರೆಯಲಾಗುವುದು. ದೊಡ್ಡಬಳ್ಳಾಪುರ ತಾಲೂಕಿನ ಮಧುರೆ ಹೋಬಳಿ ಕನಸವಾಡಿ ಕ್ಷೇತ್ರದ ಶ್ರೀ ಶನಿಮಹಾತ್ಮ ಸ್ವಾಮಿ ದೇವಾಲಯವನ್ನು ಸಂಜೆ ೪ ಗಂಟೆಗೆ ಮುಚ್ಚಲಾಯಿತು. ನಾಳೆ ಬೆಳಗಿನ ಜಾವ ಸ್ವಾಮಿಗೆ ತೈಲಾಭಿಷೇಕ, ಪಂಚಾಮೃತ ಅಭಿಷೇಕ ಸಲ್ಲಿಸಿ, ಭಕ್ತಾದಿಗಳ ದರ್ಶನಕ್ಕೆ ಅನುವು ಮಾಡಿಕೊಡಲಾಗುವುದು ಎಂದು ದೇವಾಲಯ ಆಡಳಿತ ಮಂಡಳಿ ತಿಳಿಸಿದೆ. ಚಂದ್ರ ಗ್ರಹಣ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯ ಹೊರನಾಡು ಶ್ರೀ ಅನ್ನಪೂರ್ಣೇಶ್ವರಿ ದೇವಾಲಯಗಳಲ್ಲಿ ಪೂಜೆ, ದರ್ಶನ, ಅನ್ನಸಂತಾರ್ಪಣೆ ಕಾರ್ಯಕ್ರಮಗಳನ್ನು ಇಂದು ಮಧ್ಯಾಹ್ನದ ನಂತರ

ರದ್ದುಪಡಿಸಲಾಗಿದೆ. ಶೃಂಗೇರಿ ಶಾರದಾ ಪೀಠದಲ್ಲಿ ಎಂದಿನಂತೆ ದೇವರ ದರ್ಶನ, ಪೂಜಾ ಕಾರ್ಯಕ್ರಮಗಳು ಇರಲಿದ್ದು, ಮಠದ ಯಜ್ಞ ಶಾಲೆಯಲ್ಲಿ ಇಂದು ರಾತ್ರಿ ೧೦ ರಿಂದ ೧೨ ಗಂಟೆಯವರಗೆ  ಚಂದ್ರ ಗ್ರಹಣ ಶಾಂತಿ ಹೋಮ ಹಮ್ಮಿಕೊಳ್ಳಲಾಗಿದೆ ಎಂದು ಶಾರದ ಪೀಠದ ಆಡಳಿತ ಮಂಡಳಿ ತಿಳಿಸಿದೆ.

*******

ನಗರಗಳಲ್ಲಿ ಇರುವ ಮಕ್ಕಳು ಮಣ್ಣಿನಿಂದ ಬೇರ್ಪಟ್ಟು, ನೆಲದ ಆಟ, ಪಾಠಗಳಿಂದ ದೂರ ಆಗಿದ್ದಾರೆ. ವೃದ್ಧಾಶ್ರಮಗಳು ಹೆಚ್ಚಾಗಿ, ಅಜ್ಜ-ಅಜ್ಜಿ ಕತೆಗಳಿಂದ ಮಕ್ಕಳು ವಂಚಿತರಾಗುತ್ತಿದ್ದಾರೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಬೇಸರ ವ್ಯಕ್ತಪಡಿಸಿದರು. ಬೆಂಗಳೂರಿನ ಬಾಲ ಭವನದಲ್ಲಿಂದು ಆಯೋಜಿಸಿದ್ದ 'ಮಕ್ಕಳ ಜಾತ್ರೆ'-ಸಾಂಸ್ಕೃತಿಕ ಹಬ್ಬಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನಗರದ ಮಕ್ಕಳಲ್ಲಿ ಆಟದ ಸಾಮಾಗ್ರಿಗಳನ್ನು ತಾವೇ ಸೃಷ್ಟಿಸಿಕೊಳ್ಳುವ ಕ್ರಿಯಾಶೀಲತೆಯೂ ಕಾಣೆಯಾಗಿ, ಪ್ಲಾಸ್ಟಿಕ್ ಮತ್ತು ಬ್ಯಾಟರಿಚಾಲಿತ ಆಟದ ಸಾಮಾಗ್ರಿಗಳ ಸಹವಾಸದಲ್ಲಿ ಮಕ್ಕಳ ಮನೋಲೋಕ ಹಿಗ್ಗುವ ಬದಲಿಗೆ ಕುಗ್ಗುತ್ತಿದೆ ಎಂದರು.

*******

ಕ್ರೀಡೆಯಿಂದ ಉತ್ತಮ ಆರೋಗ್ಯ ಕಾಯ್ದುಕೊಳ್ಳಲು ಸಾಧ್ಯ ಎಂದು ಕರ್ನಾಟಕ ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತಾ ಗಟ್ಟಿ ಹೇಳಿದ್ದಾರೆ. ಮಂಗಳೂರಿನಲ್ಲಿಂದು ನಡೆದ ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕ್ರೀಡೆ ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಪೂರಕವಾಗಿದೆ ಎಂದರು. ಇಂದಿನ ಒತ್ತಡದ ಬದುಕಿನಿಂದಾಗಿ ಜನ ಹಲವಾರು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಕ್ರೀಡೆ ಮತ್ತು ವ್ಯಾಯಾಮ ಉತ್ತಮ ಆರೋಗ್ಯಕ್ಕೆ ಸಹಕಾರಿಯಾಗಿದೆ ಎಂದರು. ಕ್ರೀಡೆಯಲ್ಲಿ ವಿಶೇಷ ಸಾಧನೆ ಮಾಡಿದವರಿಗೆ ವಿವಿಧ ಸರ್ಕಾರಿ ಇಲಾಖೆಗಳ ನೌಕರಿಯಲ್ಲಿ ಮೀಸಲಾತಿ ಇದ್ದು, ಅದನ್ನು ಬಳಸಿಕೊಳ್ಳುವತ್ತ ಕ್ರೀಡಾ ಸಾಧಕರು ಗಮನ ನೀಡಬೇಕು ಎಂದು ಮಮತಾ ಗಟ್ಟಿ ಸಲಹೆ ನೀಡಿದರು.

****END***